# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 52 (32) |
| ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು), |
| ಉತ್ತರಿಸುವ ದಿನಾಂಕ | : | 04.12.2023. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಮತ್ತು ಮಕ್ಕಳ ದಾಖಲಾತಿ ಸಂಖ್ಯೆ ಎಷ್ಟು; ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (2021-22 ಹಾಗೂ 2022-23ರ ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು).</td><td>ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಮತ್ತು ಮಕ್ಕಳ ದಾಖಲಾತಿ ವಿವರ ಕೆಳಕಂಡಂತಿದೆ:-<br>
<table>
<tr><th>ವರ್ಷ</th><th>ಪ್ರಾಥಮಿಕ ಶಾಲೆಗಳು</th><th>ಪ್ರೌಢ ಶಾಲೆಗಳು</th><th>ವಿದ್ಯಾರ್ಥಿಗಳ ಸಂಖ್ಯೆ</th></tr>
<tr><td>2021-22</td><td>42557</td><td>4726</td><td>4704038</td></tr>
<tr><td>2022-23</td><td>42255</td><td>4841</td><td>4545432</td></tr>
</table>
<br>ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರವು ಕೈಗೊಂಡ ಕ್ರಮಗಳು.<br>
• ಉಚಿತ ಪಠ್ಯಪುಸ್ತಕ, 2 ಜೊತೆ ಸಮವಸ್ತ್ರ, ಕ್ಷೀರಭಾಗ್ಯ ಮಧ್ಯಾಹ್ನ ಉಪಹಾರ ಯೋಜನೆ, ಶೂ, ಸಾಕ್ಸ್ ಇತ್ಯಾದಿಗಳನ್ನು ವಿತರಿಸಲಾಗುತ್ತಿದೆ.<br>
• ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಅಭಿವೃದ್ಧಿಗೊಳಿಸುವ ಸಂಬಂಧ "ಪ್ರತಿ ಮಗುವು ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ" ಎಂಬ ನೀತಿ ಗುರಿಯನ್ನು ಆಧರಿಸಿ ಕೆಳಕಂಡ ಐದು ಗುಣಾತ್ಮಕ ಕಾರ್ಯಕ್ರಮಗಳನ್ನು ಯೋಜಿಸಿದೆ.<br>
❖ ಶಿಕ್ಷಣ ಗುಣಮಟ್ಟ ಸುಧಾರಣಾ ಕಾರ್ಯಕ್ರಮ.<br>
❖ ಗುಣಮಟ್ಟ ಖಾತ್ರಿಯ ಉಪಕ್ರಮಗಳು.<br>
❖ ತಂತ್ರಜ್ಞಾನ ಆಧಾರಿತ ಕಲಿಕೆ<br>
❖ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕಗಳು<br>
❖ ವಿದ್ಯಾರ್ಥಿಗಳನ್ನು ಪ್ರೇರೇಪಿಸುವ ಕಾರ್ಯಕ್ರಮಗಳು.<br>
ಮೇಲಿನ ಐದು ಕಾರ್ಯಕ್ರಮಗಳ ಅಡಿಯಲ್ಲಿ ಕೆಳಕಂಡ ಶೈಕ್ಷಣಿಕ ಗುಣಮಟ್ಟ ಬಲವರ್ಧನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>
❖ 1 ರಿಂದ 3ನೇ ತರಗತಿಗಳಲ್ಲಿ ಶಿಶು ಕೇಂದ್ರಿತ ಸಂತೋಷದಾಯಕ ನಲಿ-ಕಲಿ ಪದ್ಧತಿಯನ್ನು</td></tr>
</table>

ಅಳವಡಿಸಲಾಗಿದೆ. ನಲಿ-ಕಲಿ ಬಲವರ್ಧನೆಗಾಗಿ ಹಲವಾರು ಚಟುವಟಿಕೆಗಳಾದ ಪಠ್ಯಕ್ರಮ ಪರಿಷ್ಕರಣೆ, ಶಿಕ್ಷಕರ ತರಬೇತಿ ಕಾರ್ಯಕ್ರಮ ಅನುಷ್ಠಾನ ಮೌಲ್ಯಮಾಪನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.

- 1 ರಿಂದ 3ನೇ ತರಗತಿಗಳ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಆರಂಭದ 3 ತಿಂಗಳ ಅವಧಿಯ "ವಿದ್ಯಾಪ್ರವೇಶ" ಎಂಬ ನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.
- ಗಣಿತ ಕಲಿಕಾ ಬಲವರ್ಧನೆಗಾಗಿ 4 ಮತ್ತು 5ನೇ ತರಗತಿಗಳಿಗೆ 'ಗಣಿತ ಕಲಿಕಾ ಆಂದೋಲನಾ ಕಾರ್ಯಕ್ರಮ' ಅನುಷ್ಠಾನಗೊಳಿಸಿದ್ದು, ಶಾಲೆಗಳಿಗೆ ಗಣಿತ ಕಿಟ್‌ಗಳನ್ನು ವಿತರಿಸಿದೆ.
- ಶಿಕ್ಷಣ ಪ್ರತಿಷ್ಠಾನದ ಸಹ ಭಾಗಿತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಸಮಾನ ವಯಸ್ಕರ ಸಮೂಹದಿಂದ ಕಲಿಕೆ ಹಾಗೂ ವಿವಿಧ ರೀತಿಯ ಪ್ರೇರಿತ ಚಟುವಟಿಕೆ ಕಾರ್ಯಕ್ರಮಗಳ ಮೂಲಕ ಕಲಿಕೆಯನ್ನು ಉತ್ತಮಗೊಳಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.
- ವಿದ್ಯಾರ್ಥಿಗಳಲ್ಲಿ ಓದು, ಬರಹ ಹಾಗೂ ಗಣಿತದ ಮೂಲಭೂತ ಕೌಶಲಗಳ (FLN) ಅಭಿವೃದ್ಧಿಗಾಗಿ ತರಗತಿಗಳಲ್ಲಿ ಅಗತ್ಯ ಚಟುವಟಿಕೆಗಳು, ಫ್ಲಾನೆಲ್ ಬೋರ್ಡ್, ವಾಚನಾ ಮೂಲೆಗಳ ಸ್ಥಾಪನೆ, ಅಕ್ಷರ ಚಪ್ಪರ ಇತ್ಯಾದಿ ಚಟುವಟಿಕೆಗಳನ್ನು ಹಮ್ಮಿಕೊಂಡಿದೆ.
- ತಂತ್ರಜ್ಞಾನ ಆಧಾರಿತ ಭೋದನಾ ಕಲಿಕಾ ಕಾರ್ಯಕ್ರಮ (TALP) ದಡಿಯಲ್ಲಿ ಶಿಕ್ಷಕರಿಗೆ ತರಗತಿ ಬೋಧನೆಯಲ್ಲಿ ತಂತ್ರಜ್ಞಾನದ ಬಳಕೆಯ ಬಗ್ಗೆ ತರಬೇತಿ ನೀಡಲಾಗಿದೆ.
- ಪ್ರಾದೇಶಿಕ ಆಂಗ್ಲ ಭಾಷಾ ತರಬೇತಿ ಸಂಸ್ಥೆ (ಆರ್.ಐ.ಇ) ಬೆಂಗಳೂರು ವತಿಯಿಂದ ಶಿಕ್ಷಕರಿಗೆ ಆಂಗ್ಲ ಭಾಷೆ ಬೋಧನಾ ತರಬೇತಿ ನೀಡಲಾಗಿದೆ.
- ರಾಜ್ಯದಲ್ಲಿ 74 ಆದರ್ಶ ವಿದ್ಯಾಲಯಗಳ ಸ್ಥಾಪನೆ ಮೂಲಕ ಗ್ರಾಮೀಣ ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸಲಾಗಿದೆ.
- ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಭಾಷಾ ಬೋಧನೆಯನ್ನು ಬಲವರ್ಧನೆಗೊಳಿಸಲು ಶಿಕ್ಷಕರ ಸಾಮರ್ಥ್ಯ ಅಭಿವೃದ್ಧಿಗೆ ಬ್ರಿಟಿಷ್ ಕೌನ್ಸಿಲ್ ಸಂಸ್ಥೆಯೊಂದಿಗೆ ಎಂ.ಓ.ಯು ಮಾಡಿಕೊಳ್ಳಲಾಗಿದೆ.
- 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅಧಿಸೂಚಿಸಲಾಗಿದ್ದು, ಈ ಪೈಕಿ 13352

| | | |
|---|---|---|
| | | ಜನ ಶಿಕ್ಷಕರು ಆಯ್ಕೆಯಾಗಿರುತ್ತಾರೆ. ಇದರಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣ ಹೊರತುಪಡಿಸಿ 12269 ಅಭ್ಯರ್ಥಿಗಳಿಗೆ ಕೌನ್ಸಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗಿದೆ.<br>❖ ಪ್ರಸ್ತುತ ಸಾಲಿನಲ್ಲಿ 35192 ಅತಿಥಿ ಶಿಕ್ಷಕರನ್ನು ಪ್ರಾಥಮಿಕ ಶಾಲೆಗಳಿಗೆ ನೇಮಿಸಿಕೊಳ್ಳಲಾಗಿರುತ್ತದೆ. ಹಾಗೂ ಪ್ರೌಢಶಾಲಾ ಶಿಕ್ಷಕರ ಖಾಲಿ ಹುದ್ದೆಗಳಿಗೆ ಎದುರಾಗಿ ಕಲ್ಯಾಣ ಕರ್ನಾಟಕ ಪ್ರದೇಶದ ಪ್ರೌಢಶಾಲೆಗಳು ಸೇರಿದಂತೆ ಒಟ್ಟು 7808 ಅತಿಥಿ ಶಿಕ್ಷಕರನ್ನು ಪ್ರೌಢಶಾಲೆಗಳಿಗೆ ನೇಮಕಾತಿ ಮಾಡಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ.<br>❖ ಕಲಿಕಾ ಸಾಧನೆಗಳ ನಿರ್ವಹಣೆಗಾಗಿ ಮಾಹಿತಿ ತಂತ್ರಾಂಶ ಆಧಾರಿತ ವಿದ್ಯಾರ್ಥಿಗಳ ಸಾಧನೆಯನ್ನು SATS (Student Achievement Tracking System) ವ್ಯವಸ್ಥೆ ಮೂಲಕ 1 ರಿಂದ 12ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಸಂಗ್ರಹಿಸಲಾಗಿದೆ ಹಾಗೂ 86 ಲಕ್ಷ ವಿದ್ಯಾರ್ಥಿಗಳ ಆಧಾರ್ ನೋಂದಣಿ ಪೂರ್ಣಗೊಂಡಿರುತ್ತದೆ.<br>❖ 1 ರಿಂದ 8ನೇ ತರಗತಿ ಅನುಗುಣವಾಗಿ ಕಲಿಕಾ ಫಲಿತಗಳು ಸಿದ್ಧಪಡಿಸಿದ್ದು, ವಿದ್ಯಾರ್ಥಿಗಳಿಗೆ, ಪೋಷಕರಿಗೆ ಹಾಗೂ ಶಾಲೆಗಳಿಗೆ ಈ ಮಾಹಿತಿಯನ್ನು ತಲುಪಿಸಲಾಗಿದೆ.<br>❖ ಶಾಲಾ ವಿದ್ಯಾರ್ಥಿಗಳ ಮೌಲ್ಯವರ್ಧನೆಗಾಗಿ ಬಾನುಲಿ ಕಾರ್ಯಕ್ರಮ ಸರಣಿಯ ಮೂಲಕ ನೈತಿಕ ಶಿಕ್ಷಣ (ನೀತಿ ಕಥೆ ಪಾಠ) ನೀಡಲಾಗುತ್ತಿದೆ.<br>❖ ರಾಜ್ಯದಲ್ಲಿ 2401 ದ್ವಿಭಾಷಾ ಮಾಧ್ಯಮ ಶಾಲೆಗಳಿಗೆ ಆಂಗ್ಲ ಕಲಿಕೆಯನ್ನು ಉತ್ತೇಜಿಸಲು ಕಲಿಕಾ ಸಾಮಾಗ್ರಿಗಳ ಕಿಟ್‌ಗಳನ್ನು ನೀಡಲಾಗಿದೆ.<br>❖ ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು (NSQF) ಎಂಬ ನೂತನ ಯೋಜನೆಯಡಿಯಲ್ಲಿ ಸಾಮಾನ್ಯ ಶಿಕ್ಷಣದಲ್ಲಿ ವೃತ್ತಿ ಶಿಕ್ಷಣದ ವಿಷಯಗಳನ್ನು ವಿದ್ಯಾರ್ಥಿಗಳ ಆಸಕ್ತಿಗನುಗುಣವಾಗಿ ಅಳವಡಿಸಿ, ಉದ್ಯೋಗ ನಿರ್ವಹಿಸಲು ಅಗತ್ಯ ಕೌಶಲ್ಯಗಳು ಮತ್ತು ಸಾಮರ್ಥ್ಯಗಳ ಬಗ್ಗೆ ತರಬೇತಿಯನ್ನು 9 ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ರಾಜ್ಯದ 275 ಶಾಲೆಗಳಲ್ಲಿ ವೃತ್ತಿ ಶಿಕ್ಷಣ ನೀಡಲಾಗುತ್ತಿದೆ.<br>❖ 5 ಕಿ.ಮೀ ವ್ಯಾಪ್ತಿಯಲ್ಲಿ ಪ್ರೌಢಶಾಲೆ ಲಭ್ಯತೆ ಇಲ್ಲದ ಪ್ರದೇಶಗಳಲ್ಲಿ 8ನೇ ತರಗತಿ ಹೊಂದಿರುವ 103 ಹಿರಿಯ |

| | | |
|---|---|---|
| | | ಪ್ರಾಥಮಿಕ ಶಾಲೆಗಳನ್ನು 9 ಹಾಗೂ 10 ತರಗತಿಗಳಿಗೆ ಉನ್ನತೀಕರಿಸಲಾಗಿದೆ.<br>❖ ಪ್ರೌಢಶಾಲಾ ಶಿಕ್ಷಕರಿಗೆ ವಿಷಯಾಧಾರಿತ ತರಬೇತಿಗಳನ್ನು ನೀಡಲಾಗುತ್ತಿದೆ.<br>❖ ಕಲಿಕಾ ಫಲಗಳನ್ನು (Learning Outcomes) ಆಧರಿಸಿ ಚಟುವಟಿಕೆ ಆಧಾರಿತ ಶಿಕ್ಷಣವನ್ನು ದೃಢಪಡಿಸಲು 1 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ವಿಷಯವಾರು ಚಟುವಟಿಕೆ ಪುಸ್ತಕ ಹಾಗೂ ಶಿಕ್ಷಕರಿಗೆ ಚಟುವಟಿಕೆ ಬ್ಯಾಂಕ್ ನೀಡಲಾಗುತ್ತಿದೆ. |
| ಆ) | 2023-24ನೇ ಸಾಲಿನಲ್ಲಿ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ; ಮುಚ್ಚಿದ್ದಲ್ಲಿ, ಯಾವ ಕಾರಣಕ್ಕಾಗಿ ಮುಚ್ಚಲಾಗಿದೆ; ಶಾಲೆಗಳನ್ನು ಮುಚ್ಚುವುದರಿಂದ ಬಡಮಕ್ಕಳ ಶಿಕ್ಷಣ ಮೊಟಕುಗೊಳಿಸಿ ಈ ಮಕ್ಕಳ ಮೂಲಭೂತ ಹಕ್ಕನ್ನು ಕಸಿದಂತೆ ಆಗುವುದಿಲ್ಲವೇ; (ಸಂಪೂರ್ಣ ಮಾಹಿತಿ ನೀಡುವುದು). | 2023-24ನೇ ಸಾಲಿನಲ್ಲಿ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚಿರುವುದಿಲ್ಲ. ಒಂದು ವೇಳೆ ಮಕ್ಕಳ ದಾಖಲಾತಿ ಶೂನ್ಯವಾದಲ್ಲಿ ತಾತ್ಕಾಲಿಕವಾಗಿ ಶಾಲೆಯನ್ನು ಸ್ಥಗಿತಗೊಳಿಸಿ ಭವಿಷ್ಯದಲ್ಲಿ ಮಕ್ಕಳು ದಾಖಲಾದಲ್ಲಿ ಪುನ: ಶಾಲೆಯನ್ನು ಪ್ರಾರಂಭಿಸಲಾಗುವುದು. |
| ಇ) | ಸರ್ಕಾರಿ ಶಾಲೆಗಳನ್ನು ಉಳಿಸಿ, ಬೆಳೆಸಿ ಹಾಗೂ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು). | ಸರ್ಕಾರಿ ಶಾಲೆಗಳ ಮೌಲ್ಯವರ್ಧನೆಗಾಗಿ ಶಾಲೆಗಳಲ್ಲಿ ಪ್ರತಿಭಾಕಾರಂಜಿ, ಸಹ ಪಠ್ಯ ಚಟುವಟಿಕೆಗಳು, ಕಲಾ ಉತ್ಸವ ಪಾರಂಪರಿಕ ಕ್ಷೇತ್ರಗಳಿಗೆ ಪ್ರವಾಸ, ಶಿಕ್ಷಕರ ಸಾಮಾರ್ಥ್ಯಾಭಿವೃದ್ಧಿ ಕಾರ್ಯಕ್ರಮಗಳು, ವಿದ್ಯಾರ್ಥಿಗಳಲ್ಲಿ ಮೌಲ್ಯವರ್ಧನೆಗಾಗಿ ಸ್ವಚ್ಛತಾ ಕಾರ್ಯಕ್ರಮ, ಪ್ರಜಾ ಪ್ರಭುತ್ವದ ಬಗ್ಗೆ ಅರಿವು ಮೂಡಿಸುವ ಸಂಬಂಧ ಅಣಕು ಸಂಸತ್ ಕಾರ್ಯಕ್ರಮ, ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸುವ ದೃಷ್ಟಿಯಿಂದ ರಸಪ್ರಶ್ನೆ ಕಾರ್ಯಕ್ರಮ, ವಸ್ತು ಪ್ರದರ್ಶನ, ಚರ್ಚಾಸ್ಪರ್ಧೆ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. |

ಸಂಖ್ಯೆ: ಇಪಿ 42 ಪಿಎಂಎ 2023

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.